# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1129
2. ಸದಸ್ಯರ ಹೆಸರು : ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು)
3. ಉತ್ತರಿಸಬೇಕಾದ ದಿನಾಂಕ : 22.09.2022
4. ಉತ್ತರಿಸುವ ಸಚಿವರು : ಮುಖ್ಯಮಂತ್ರಿ.

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಜಿಲ್ಲಾ ಮತ್ತು ತಾಲ್ಲೂಕಾಧಿಕಾರಿಗಳು ಒಂದು ಸಲ ವರ್ಗಾವಣೆಯಾದರೆ ಅವರು ಆ ಸ್ಥಳದಲ್ಲಿ ಎಷ್ಟು ವರ್ಷಗಳ ಕಾಲ ಕಾರ್ಯ ಮಾಡಬೇಕೆನ್ನುವ ನಿಯಮವಿದೆ ; | ಸರ್ಕಾರಿ ನೌಕರರ ವರ್ಗಾವಣೆಗಳನ್ನು ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 22 ಸೇನೌವ 2013 ದಿನಾಂಕ: 07.06.2013ರನ್ವಯ ನಿಯಂತ್ರಿಸಲಾಗುತ್ತಿದೆ. ವರ್ಗಾವಣೆಗಳನ್ನು ಸಕ್ಷಮ ಪ್ರಾಧಿಕಾರಗಳು ಈ ಆದೇಶದಲ್ಲಿ ನಮೂದಿಸಿರುವ ಷರತ್ತುಗಳಿಗೊಳಪಟ್ಟು ಮುಖ್ಯವಾಗಿ ಸಾರ್ವಜನಿಕ ಹಿತದೃಷ್ಟಿಯಿಂದ ಪಾರದರ್ಶಕವಾಗಿ ಕೈಗೊಳ್ಳುತ್ತಿವೆ. ಸದರಿ ಮಾರ್ಗಸೂಚಿಗಳು ಪ್ರತ್ಯೇಕ ವರ್ಗಾವಣೆ ನೀತಿಗಳನ್ನು ಹೊಂದಿರುವ ಕೆಲವೊಂದು ಇಲಾಖೆಗಳನ್ನು ಹೊರತುಪಡಿಸಿ, ರಾಜ್ಯ ಸರ್ಕಾರದ ಇತರೆ ಇಲಾಖೆಗಳ ಗ್ರೂಪ್-ಎ ಮತ್ತು ಗ್ರೂಪ್-ಬಿ ವೃಂದದ ಅಧಿಕಾರಿಗಳನ್ನು ಒಳಗೊಂಡಂತೆ ಎಲ್ಲಾ ವೃಂದಗಳ ಅಧಿಕಾರಿ/ನೌಕರರುಗಳಿಗೂ ಅನ್ವಯವಾಗುತ್ತವೆ.<br><br>ಜಿಲ್ಲಾ ಮತ್ತು ತಾಲ್ಲೂಕು ಅಧಿಕಾರಿಗಳು ಸಾಮಾನ್ಯವಾಗಿ ಗ್ರೂಪ್-ಎ ಮತ್ತು ಗ್ರೂಪ್-ಬಿ ವೃಂದದ ಅಧಿಕಾರಿಗಳಾಗಿರುತ್ತಾರೆ. ದಿನಾಂಕ: 07.06.2013ರ ಆದೇಶದನ್ವಯ ಗ್ರೂಪ್-ಎ ಮತ್ತು ಗ್ರೂಪ್-ಬಿ ವೃಂದದ ಹುದ್ದೆಗಳಿಗೆ ಎರಡು ವರ್ಷ ಕನಿಷ್ಠ ಸೇವಾವಧಿಯನ್ನು ನಿಗದಿಪಡಿಸಲಾಗಿರುತ್ತದೆ. ಈ ಅವಧಿಯನ್ನು ಪೂರೈಸದ ಹೊರತು ಸಾಮಾನ್ಯವಾಗಿ ನೌಕರರನ್ನು ವರ್ಗಾವಣೆ ಮಾಡುವಂತಿಲ್ಲ. ಅದಾಗ್ಯೂ, ಸಾರ್ವಜನಿಕ ಹಿತದೃಷ್ಟಿಯಿಂದ ವಿಶೇಷವಾದ ಅಥವಾ ಅಪವಾದಾತ್ಮಕ ಸಂದರ್ಭಗಳಲ್ಲಿ ಮಾಡುವ ವರ್ಗಾವಣೆಗಳಲ್ಲಿ, ಯಾವುದೇ ರೀತಿಯ ಅವಧಿಪೂರ್ವ ವರ್ಗಾವಣೆಗಳನ್ನು ಹಾಗೂ ಸಾಮಾನ್ಯ ವರ್ಗಾವಣೆ ಅವಧಿ ಮುಗಿದ ನಂತರದಲ್ಲಿ ಕೈಗೊಳ್ಳುವ ವರ್ಗಾವಣೆಗಳನ್ನು ಮಾಡುವ ಮುನ್ನ ಸಚಿವಾಲಯದ ಆಡಳಿತ ಇಲಾಖೆಗಳು ಮುಖ್ಯಮಂತ್ರಿಯವರ ಪೂರ್ವಾನುಮೋದನೆ ಪಡೆದು ಮಾಡತಕ್ಕದೆಂದು ಸ್ಪಷ್ಟಪಡಿಸಲಾಗಿದೆ.<br><br>ವರ್ಗಾವಣೆಗಳನ್ನು ಸಾರ್ವಜನಿಕ ಮತ್ತು ಆಡಳಿತಾತ್ಮಕ ಹಿತದೃಷ್ಟಿಯಿಂದ ಕೈಗೊಳ್ಳಲಾಗುತ್ತಿದೆ. |
| ಆ) | ಹಾಗಿದ್ದಲ್ಲಿ, ಈ ಅಧಿಕಾರಿಗಳನ್ನು ವರ್ಷದಲ್ಲಿ 3-4 ಬಾರಿ ವರ್ಗಾವಣೆ ಮಾಡುತ್ತಿರುವುದು ಯಾವ ಉದ್ದೇಶಕ್ಕಾಗಿ ಹಾಗೂ ಯಾವ ನಿಯಮದಡಿ ; | |
| ಇ) | ಈ ವ್ಯವಸ್ಥೆಯಿಂದ ಅಧಿಕಾರದ ದುರ್ಬಳಕೆ ಆಗುವುದಿಲ್ಲವೆ ಹಾಗೂ ಅಭಿವೃದ್ಧಿ ಕಾರ್ಯ ಕುಂಠಿತವಾಗಿ ಸಾರ್ವಜನಿಕರಿಗೆ ತೊಂದರೆಯಾಗುವುದಿಲ್ಲವೆ; ಈ ಕುರಿತು ಸರ್ಕಾರದ ನಿಲುವೇನು? | |

ಸಂಖ್ಯೆ: ಸಿಆಸುಇ 37 ಸೇವನೆ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ.